## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1320 |
| ಸದಸ್ಯರ ಹೆಸರು | ಶ್ರೀ ಕೆ.ಪ್ರತಾಪ್ ಸಿಂಹ ನಾಯಕ್ |
| ಉತ್ತರಿಸುವ ದಿನಾಂಕ | 19.03.2025 |
| ಉತ್ತರಿಸುವವರು | ಸಾರಿಗೆ ಮತ್ತು ಧಾರ್ಮಿಕ ದತ್ತಿ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಮುಜರಾಯಿ ಇಲಾಖೆಯಡಿ ಬರುವ 'ಸಿ' ವರ್ಗದ ದೇಗುಲಗಳಿಗೆ ನೀಡುತಿರುವ ತಸ್ತೀಕ್ ಮೊತ್ತವನ್ನು ಹೆಚ್ಚಿಸಬೇಕೆಂಬ ಬೇಡಿಕೆ ಬಹುಕಾಲದಿಂದ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಮುಜರಾಯಿ ಇಲಾಖೆಯಡಿ ಬರುವ 'ಸಿ' ವರ್ಗದ ದೇಗುಲಗಳಿಗೆ ನೀಡುತ್ತಿರುವ ತಸ್ತೀಕ್ ಮೊತ್ತವನ್ನು ಹೆಚ್ಚಿಸಬೇಕೆಂಬ ಬೇಡಿಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಆ) | ಮುಜರಾಯಿ ಇಲಾಖೆಯಡಿ ಬರುವ 'ಸಿ' ವರ್ಗದ ದೇಗುಲಗಳಿಗೆ ಪ್ರಸ್ತುತ ನೀಡುತ್ತಿರುವ ತಸ್ತೀಕ್ ಮೊತ್ತವೆಷ್ಟು; | ಪ್ರಸ್ತುತ ಧಾರ್ಮಿಕ ಇಲಾಖೆಯಡಿ ಬರುವ 'ಸಿ' ವರ್ಗದ ದೇಗುಲಗಳಿಗೆ ಸರ್ಕಾರದ ಆದೇಶ ಸಂಖ್ಯೆ: ಕಂಇ 142 ಮುಅಬಿ 2022, ದಿನಾಂಕ:11.04.2022ರ ಆದೇಶದಂತೆ ವಾರ್ಷಿಕ ರೂ.60,000ಗಳ ತಸ್ತೀಕ್ ಮೊತ್ತವನ್ನು ನೀಡಲಾಗುತ್ತಿದೆ. |
| ಇ) | ಯಾವ ಕಾಲಮಿತಿಯೊಳಗೆ, ಮುಜರಾಯಿ ಇಲಾಖೆಯಡಿ ಬರುವ 'ಸಿ' ವರ್ಗದ ದೇಗುಲಗಳಿಗೆ ಪ್ರಸ್ತುತ ನೀಡುತ್ತಿರುವ ತಸ್ತೀಕ್‌ಮೊತ್ತವನ್ನು ಗಣನೀಯ ಪ್ರಮಾಣದಲ್ಲಿ ಹೆಚ್ಚಿಸಲಾಗುವುದು; | 2025-26ನೇ ಆಯವ್ಯಯದಲ್ಲಿ ವಾರ್ಷಿಕ ತಸ್ತೀಕ್ ಮೊತ್ತವನ್ನು ರೂ.60,000ಗಳಿಂದ ರೂ.72,000ಗಳಿಗೆ ಹೆಚ್ಚಳ ಮಾಡಲು ಘೋಷಿಸಲಾಗಿರುತ್ತದೆ. |
| ಈ) | ಮುಜರಾಯಿ ಇಲಾಖೆಯಡಿ ಬರುವ 'ಸಿ' ವರ್ಗದ ದೇಗುಲಗಳನ್ನು ಕಾರ್ಪೊರೇಟ್ ಸಾಮಾಜಿಕ ಹೊಣೆಗಾರಿಕೆ ನಿಧಿಯನ್ನು (ಸಿಎಸ್‌ಆರ್) ಬಳಸಿಕೊಂಡು ಅಭಿವೃದ್ಧಿಪಡಿಸಲು ಸರ್ಕಾರ ಈ ಕೂಡಲೇ ಅಗತ್ಯ ಕ್ರಮವಹಿಸುವುದೇ? | ಧಾರ್ಮಿಕ ದತ್ತಿ ಇಲಾಖೆಯಡಿ ಬರುವ 'ಸಿ' ವರ್ಗದ ದೇವಾಲಯಗಳ ಜೀರ್ಣೋದ್ಧಾರ/ ದುರಸ್ತಿ/ ನವೀಕರಣಕ್ಕೆ ಪ್ರಸ್ತಾವನೆಗಳು ಸ್ವೀಕೃತಗೊಂಡಲ್ಲಿ ನಿಯಮಾನುಸಾರ ಪರಿಶೀಲಿಸಿ ಆರ್ಥಿಕ ಲಭ್ಯತೆಗನುಗುಣವಾಗಿ ಅನುದಾನ ಬಿಡುಗಡೆಗೊಳಿಸಲು ಕ್ರಮ ವಹಿಸಲಾಗುತ್ತಿದೆ.<br><br>ಅಲ್ಲದೇ, ಸಾಮಾನ್ಯ ಸಂಗ್ರಹಣಾ ನಿಧಿಯಿಂದಲೂ ಹಲವಾರು ದೇವಾಲಯಗಳ ಅಭಿವೃದ್ಧಿಗೆ ಅನುದಾನ ಬಿಡುಗಡೆ ಮಾಡಲಾಗಿರುತ್ತದೆ. ಇಲಾಖೆಯಡಿ ಬರುವ 'ಸಿ' ವರ್ಗದ ದೇವಾಲಯಗಳನ್ನು ಕಾರ್ಪೊರೇಟ್ ಸಾಮಾಜಿಕ ಹೊಣೆಗಾರಿಕೆ ನಿಧಿಯನ್ನು (ಸಿಎಸ್‌ಆರ್) ಬಳಸಿಕೊಂಡು ಅಭಿವೃದ್ಧಿಪಡಿಸುವುದಕ್ಕೆ ಅಗತ್ಯ ಪ್ರಸ್ತಾವನೆಗಳು ಸ್ವೀಕೃತವಾದಲ್ಲಿ ಈ ಬಗ್ಗೆ ನಿಯಮಾನುಸಾರ ಪರಿಶೀಲಿಸಲಾಗುತ್ತದೆ. |

ಸಂಖ್ಯೆ: ಕಂಇ 82 ಮುಸಪ್ರ 2025

(ರಾಮಲಿಂಗಾರೆಡ್ಡಿ)
ಸಾರಿಗೆ ಮತ್ತು ಧಾರ್ಮಿಕ ದತ್ತಿ ಸಚಿವರು